ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಶಿಕ್ಷಣ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ    ದಿನಾಂಕ : DATE : 16/07/2017

ಆದೇಶ | ಉದಯವಾಣಿ ವರದಿ ಬಗ್ಗೆ ಗಂಭೀರವಾಗಿ ಪರಿಗಣನೆ

# ಎಲ್ಲ ಶಾಲೆಗಳಲ್ಲಿ ಕಡ್ಡಾಯ ಶೌಚಾಲಯಕ್ಕೆ ಆದೇಶ

• ರಾಜು ಖಾರ್ವಿ ಕೊಡೇರಿ

**ಬೆಂಗಳೂರು:** ರಾಜ್ಯದ ಎಲ್ಲ ಸರ್ಕಾರಿ ಶಾಲೆಗಳೂ ಅಕ್ಟೋಬರ್ 1ರೊಳಗೆ ಕಡ್ಡಾಯವಾಗಿ ಶೌಚಾಲಯಗಳನ್ನು ಹೊಂದಲೇಬೇಕು ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಆದೇಶ ಹೊರಡಿಸಿದ್ದಾರೆ.

'ನಾಲ್ಕು ಸಾವಿರ ಶಾಲೆಗಳಲ್ಲಿ ಬಯಲೇ ಶೌಚ' ಎಂಬ ಶೀರ್ಷಿಕೆಯಡಿ ಉದಯವಾಣಿ ವಿಸ್ತೃತ ವರದಿ ಪ್ರಕಟಿಸಿ, ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಶೌಚಾಲಯ ಇಲ್ಲದೇ ಇರುವ ಬಗ್ಗೆ ಬೆಳಕು ಚೆಲ್ಲಿತ್ತು. ಪತ್ರಿಕೆಯ ವರದಿಯನ್ನು ಗಂಭೀರವಾಗಿ ಪರಿಗಣಿಸಿರುವ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಸೆ.30ರೊಳಗಾಗಿ ನರೇಗಾ ಯೋಜನೆಯಡಿಯಲ್ಲಿ ಅಭಿಯಾನ ಕೈಗೊಂಡು, ಅ. 1ಕ್ಕೆ ಎಲ್ಲ ಸರ್ಕಾರಿ ಶಾಲೆಗಳಲ್ಲೂ ಕಡ್ಡಾಯವಾಗಿ ಶೌಚಾಲಯ ನಿರ್ಮಿಸಲೇಬೇಕು ಎಂದು ನಿರ್ದೇಶನ ನೀಡಿದ್ದಾರೆ.

2018ರ ವಿಧಾನಸಭಾ ಚುನಾವಣೆ ಹಾಗೂ 2019ರ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ ಸರ್ಕಾರಿ (ಮತಗಟ್ಟೆಗಳೆಂದು ಗುರುತಿಸಿರುವ) ಶಾಲೆಗಳಲ್ಲಿ ಶೌಚಾಲಯ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲಾಗಿತ್ತು. ಹಾಗೆಯೇ ಶೌಚಾಲಯ ಹಾಗೂ ಶುದ್ಧ ಕುಡಿಯುವ ನೀರಿಗಾಗಿ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಂಬಂಧಪಟ್ಟ ಶಾಲೆಗಳ ಮುಖ್ಯೋಪಾಧ್ಯಾಯರ ಖಾತೆಗೆ ಹಣ ಜಮಾ ಮಾಡುತ್ತಾರೆ. ಆದರೆ, ಸುಮಾರು 4 ಸಾವಿರ ಶಾಲೆಗಳಲ್ಲಿ ಶೌಚಾಲಯ ಇಲ್ಲ ಎಂದಾದ ಮೇಲೆ ಬಳಕೆ ಆಗದೇ ಇರುವ ಅನುದಾನ ಸರ್ಕಾರಕ್ಕೆ ವಾಪಸ್ ನೀಡಬೇಕಿತ್ತು. ಈ ಹಿನ್ನೆಲೆಯಲ್ಲಿ ಎಲ್ಲ ಉಪನಿರ್ದೇಶಕರು, ತಮ್ಮ ಆಡಳಿತ ವ್ಯಾಪ್ತಿಯ ಸರ್ಕಾರಿ ಶಾಲೆಗಳ ವಾಟ್ಸ್ಆ್ಯಪ್ ಗ್ರೂಪ್ ರಚಿಸಿ, ಪ್ರತಿ ವಾರವೂ ಸಮೀಕ್ಷೆ ನಡೆಸಿ, ಶೌಚಾಲಯಗಳಿಲ್ಲದ ಶಾಲೆಗಳ ಪಟ್ಟಿ ಸಿದ್ಧಪಡಿಸಲು ಸೂಚಿಸಿದ್ದೇವೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತರು ತಿಳಿಸಿದ್ದಾರೆ.




ಉ ಫಲಶ್ರುತಿ

- ನರೇಗಾ ಯೋಜನೆಯಲ್ಲಿ ಅಭಿಯಾನ ಕೈಗೊಳ್ಳಲು ಸೂಚನೆ
- ಎಲ್ಲ ಶಾಲೆಗಳಲ್ಲಿ ಅ.1ರ ಹೊತ್ತಿಗೆ ಶೌಚಾಲಯ ನಿರ್ಮಾಣ ಖಚಿತ
- ಈ ಬಗ್ಗೆ ದೃಢೀಕರಣ ಪತ್ರವನ್ನು ನೀಡುವಂತೆಯೂ ಸಿಎಸ್ ಆದೇಶ

**ಶೌಚಾಲಯದ ಮಾಹಿತಿ ನೀಡಿ:** ಮಕ್ಕಳ ದಾಖಲಾತಿಗೆ ಅನುಗುಣವಾಗಿ ಪ್ರಸ್ತುತ ಇರುವ ಶೌಚಾಲಯದ ಲಭ್ಯತೆ, ಹೆಚ್ಚುವರಿ ಶೌಚಾಲಯದ ಅಗತ್ಯ ಇದ್ದಲ್ಲಿ ಅಂದಾಜು ಮೊತ್ತದ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ, ಪೂರಕ ದಾಖಲೆಗಳೊಂದಿಗೆ ಜಿಲ್ಲಾ ಪಂಚಾಯತಿ ಮುಖ್ಯಕಾರ್ಯನಿರ್ವಹಣಾಧಿಕಾರಿಗೆ ಸಲ್ಲಿಸಬೇಕು. ನರೇಗಾ ಯೋಜನೆಯಡಿ ಲಭ್ಯವಿರುವ ಅನುದಾನಕ್ಕೆ ಅನುಗುಣವಾಗಿ ಜಿಲ್ಲಾ ಹಂತದಲ್ಲೇ ಶೌಚಾಲಯ ನಿರ್ಮಾಣಕ್ಕೆ ಅನುದಾನ ನೀಡಲಾಗುತ್ತದೆ. ಹೀಗಾಗಿ ಎಲ್ಲ ಜಿಲ್ಲೆಗಳ ಸಮೀಕ್ಷಾ ವರದಿಯನ್ನು ಅಂಕಿ-ಅಂಶಗಳು ಹಾಗೂ ಶಾಲೆಗಳ ಪಟ್ಟಿ ಸಹಿತವಾಗಿ ಆಗಸ್ಟ್ 30ರೊಳಗೆ 'ತಮ್ಮ ಜಿಲ್ಲೆಯಲ್ಲಿ ಶೌಚಾಲಯ ರಹಿತ ಶಾಲೆಗಳು ಯಾವುದೂ ಇರುವುದಿಲ್ಲ; ಎಲ್ಲ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳು ಅಕ್ಟೋಬರ್ 1ರ ಹೊತ್ತಿಗೆ ಶೌಚಾಲಯ ಹೊಂದಿರುತ್ತವೆ' ಎಂಬ ದೃಢೀಕರಣ ಪತ್ರವನ್ನು ಜಿಲ್ಲಾ ಉಪನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆಗೆ ನೀಡಬೇಕು. ಶೌಚಾಲಯ ಇಲ್ಲದೇ ಇರುವ ಬಗ್ಗೆ ಸಾರ್ವಜನಿಕರಿಂದ ಯಾವುದೇ ದೂರು ಬಂದರೂ ಜಿಲ್ಲಾ ಉಪನಿರ್ದೇಶಕರನ್ನೇ ಹೊಣೆಗಾರರನ್ನಾಗಿಸಿ ಶಿಸ್ತು ಕ್ರಮ ಕೈಗೊಳ್ಳುವುದಾಗಿಯೂ ಎಚ್ಚರಿಕೆ ನೀಡಲಾಗಿದೆ.